# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1332
ಸದಸ್ಯರ ಹೆಸರು : ಶ್ರೀ ರಾಮೋಜಿ ಗೌಡ
ಉತ್ತರಿಸುವ ದಿನಾಂಕ : 19.03.2025
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಸೆಕ್ಷನ್ 95ರ ತಿದ್ದುಪಡಿ ಅಧಿಸೂಚನೆ ದಿನಾಂಕ:27-01-2023 ರಂದು ಹೊರಡಿಸಿದ್ದರೂ ಇಲ್ಲಿಯವರೆಗೆ ಈ ಅಧಿಸೂಚನೆಯನ್ನು ಜಾರಿ ಮಾಡದಿರಲು ಕಾರಣಗಳೇನು: | ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 95ರ ತಿದ್ದುಪಡಿ ಅಧಿಸೂಚನೆ ದಿನಾಂಕ:27-01-2023 ರಂದು ಹೊರಡಿಸಲಾಗಿದ್ದು ಅದಕ್ಕೆ ಅನುಗುಣವಾಗಿ ನಿಯಮಗಳನ್ನು ರಚಿಸಿದ ನಂತರ ಸದರಿ ಅಧಿಸೂಚನೆಯನ್ನು ಜಾರಿಗೆ ತರಲಾಗುವುದು. |
| ಆ) | ಈ ಅಧಿಸೂಚನೆ ಹೊರಡಿಸಿದ್ದರೂ ಇದುವರೆವಿಗೂ ಜಾರಿ ಮಾಡದಿರುವುದರಿಂದ ನಗರ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಗಳಿಗೆ ಬದಲಾಯಿಸಲು ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ.156 ಎಲ್.ಜಿ.ಪಿ. 2020(ಇ), ದಿನಾಂಕ: 21.09.2020ರಲ್ಲಿ ಸೂಕ್ತ ನಿರ್ದೇಶನಗಳನ್ನು ನೀಡಲಾಗಿದೆ. ಅದರಂತೆ ಅಫಿಡವಿಟ್ ಆಧಾರಿತ ಭೂ ಪರಿವರ್ತನಾ ತಂತ್ರಾಂಶದಲ್ಲಿ ನಗರ ಪ್ರದೇಶಗಳಲ್ಲಿನ ಜಮೀನುಗಳಿಗೆ ಭೂ ಪರಿವರ್ತನೆ ಚಾಲನೆಯಲ್ಲಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಿಲ್ಲ. |
| ಇ) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಸೆಕ್ಷನ್ 95ರ ತಿದ್ದುಪಡಿ ಅಧಿಸೂಚನೆ ದಿನಾಂಕ:27-01-2023ನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಯಾವಾಗ ಜಾರಿ ಮಾಡಲಾಗುವುದು? | ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 95ರ ತಿದ್ದುಪಡಿಗೆ ಸಂಬಂಧಿಸಿದಂತೆ ನಿಯಮಗಳನ್ನು ರಚಿಸಿದ ನಂತರ ಸದರಿ ಕಾಯ್ದೆಯನ್ನು ಜಾರಿಗೆ ತರಲಾಗುವುದು. |

ಸಂಖ್ಯೆ: ಆರ್‌ಡಿ 55 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು